ಬೆಂಗಳೂರು ಸಿಟಿ ಮ್ಯುನಿಸಿಪಾಲಿಟಿ.

ನೊ ೧ ಟ ಸ್ .

ತಾರೀಖು 21ನೇ ಜುಲೈ 1903.

ಬೆಂಗಳೂರು ಸಿಟಿ 4 ವ 5, 6 ಮತ್ತು 7ನೇ ಡಿವೀರ್ಜಗಳಿಗೆ ಇದುವರಿವಿಗೂ ಇದ್ದ ರಿಜಿಸ್ಟ್ರಾರಿಗಳನ್ನು ವಜಾ ಮಾಡಿದ್ದರಿಂದ 4 ವ 5ನೇ ಡಿವೀರ್ಜಗಳ ನಿವಾಸಿಗಳು ಜನನ ಮರಣ ಇತ್ಯಾದಿಗಳನ್ನು 2ನೇ ಡಿವೀರ್ಜ ಚಿಕ್ಕಪ್ಯಾಟೆಯಲ್ಲಿ ಇರುವ ತಾಲ್ಲೂಕು ಕಛೇರಿ ಕಟ್ಟಡದಲ್ಲಿ ಇರತಕ್ಕ ರಿಜಿಸ್ಟ್ರಾರ್ ಆಫೀಸಿನಲ್ಲಿ ರಿಪೋರ್ಟು ಮಾಡಬೇಕೆಂತಲೂ, ಮತ್ತು 6 ವ 7ನೇ ಡಿವೀರ್ಜಗಳ ನಿವಾಸಿಗಳು 3ನೇ ಡಿವೀರ್ಜ ಅರಳಪ್ಯಾಟೆ ಆಸ್ಪತ್ರೆಯಲ್ಲಿ ಇರುವ ರಿಜಿಸ್ಟ್ರಾರ್ ಆಫೀಸಿನಲ್ಲಿ ರಿಪೋರ್ಟು ಮಾಡಬೇಕೆಂತಲೂ ಇದರಿಂದ ಸಹಸ್ತ ಜನರಿಗೂ ತಿಳಿಯಪಡಿಸಿ ಇರುತ್ತೆ.

ಪಿ. ಪಲ್ಪ್, ಫ್ಲಾರ್ ಪ್ರೆಸಿಡೆಂಟ್.

ಬೆಂಗಳೂರ್ ಗೌರ್ನಮೆಂಟ್ ಸೆಂಟ್ರಲ್ ಬುಕ್ ಡಿಪೋ.

ಬ ತಾರೀಖು 16ನೇ ಜುಲೈ 1903.

ಸರ್ವೀಸ್ ರಿಜಸ್ಟರ್‌ಗಳು ಈಗತಾನೆ ಪ್ರಿಂಟಾಗಿ ಬಂದಿರುತ್ತಾಗಿ—ಪ್ರತಿ ಬಂದಕ್ಕೆ ಅರ್ಧಾಣೆ ಮೇರೆ ಮಾರಾಟಕ್ಕೆ ಸಿದ್ಧವಾಗಿರುತ್ತವೆಂದು ಇದರಿಂದ ಪ್ರಸಿದ್ಧಪಡಿಸಿರುತ್ತೆ.

ಎಸ್. ಅಬ್ದುಲ್ ಹೈ, ಕ್ಯೂರೇಟರ್.

ನೋಟಿಸ್.

ತಾರೀಖು 29ನೇ ಜುಲೈ 1903.

ಮೈಸೂರು ಕಿಲ್ಲೆಯಲ್ಲಿರುವ ನೇತ್ರವೈದ್ಯ ನಾರಣಪಂಡಿತರ ಹಿರೀಮಗ ನೇತ್ರವೈದ್ಯ ನಂಜುಂಡಪಂಡಿತನಾದ ನಾನು ಇದರಿಂದ ಸರ್ವರಿಗೂ ತಿಳಿಸುವುದೇನೆಂದರೆ:—

ಸೀತಾವಿಳಾಸ ಸನ್ನಿಧಾನದಿಂದ ನಮ್ಮ ತಂದೆಗಳ ಹೆಸರಿಗೆ ಬಂದು ವೃತ್ತಿಯು ಬಂದಿರುತ್ತೆ. ಈ ವೃತ್ತಿಗೆ ಸೇರಿಸ್ಥ ಸೀತಾವಿಳಾಸ ಅಗ್ರಹಾರದಲ್ಲಿನ ಬಂದು ಮನೆಯೂ, ಮತ್ತು ಇದಕ್ಕೆ ಸೇರಿದ ಎಡತೊರೆ ತಾಲ್ಲೂಕು ಗಂಧನಹಳ್ಳಿ ನಾಲಾ ಕೆಳಗೆ ಇರುವ (5) ಐದು ಎಕರೆ ಜಮೀನನ್ನು ಸಹಾ ಸದರಿ ನಾರಣಪಂಡಿತರು ಕ್ರಯ ವಗ್ಯೆರೆ ಮಾಡುವುದಕ್ಕೆ ಉದ್ಯುಕ್ತರಾಗಿರುವದಾಗಿ ವರ್ತಮಾನ ಕೇಳುತ್ತೇನೆ. ಪಿಟೋ ವೃತ್ತಿಯಲ್ಲಿ ಜ್ಯೇಷ್ಠ ಪುತ್ರನಾದ ನಾನು ಅರ್ಧ ಹಿಸ್ಸೆಗೆ ಬಾಧ್ಯನಾಗಿರುತ್ತೇನೆ. ಆದ್ದರಿಂದ ಯಾರೂ ಕ್ರಯ ವಗ್ಯೆರೆ ಮಾಡಿಕೊಳ್ಳಕೂಡದೆಂಬದಾಗಿ ತಿಳಿಯಪಡಿಸಿರುತ್ತೇನೆ.

ನೇತ್ರವೈದ್ಯ ನಂಜುಂಡಪಂಡಿತನ ರುಜು.

ಗೆಜೆಟ್ ಇನ್ಸ್ಟ್ರಾರ್.

ಮೈಸೂರ ಗೆಜೆಟ್ ಕಂಪೈಲರವರು ಇದರಿಂದ ಪ್ರಸಿದ್ಧಪಡಿಸುವದೇನೆಂದರೆ, ಪೋಷ್ಟಿಗೆ ಕಳುಹಿಸಲ್ಪಡುವ ದರೋಬಸ್ತು ಗೆಜೆಟ್ ಕಾಪಿಗಳು ಅವುಗಳು ರವಾನಿಸುವದಕ್ಕೆ ತತ್ಪೂರ್ವವೆ ಕ್ರಮವಾದ ತನಿಖೆ ಮತ್ತು ಮೊಕಾಬಿಲೆ ಮಾಡುವ ಪದ್ಧತಿಯು ಇಷ್ಟರೋಣದರಿಂದ ಸದರೀ ಕಾಪಿಗಳು ಗೈರಿವಿಲೆ ಅಥವಾ ವಿಳಾಸದಾರರುಗಳಿಗೆ ಪಾವತಿ ಆಗದೆ ಇರುವ ವಿಷಯದಲ್ಲಿ ಕಂಪೈಲರ್‌ವರ್ಜ ಜವಾಬುದಾರರಾಗಿರುವದಿಲ್ಲ ಮತ್ತು ಅಂಥಾ ಗೈರಿವಿಲೆಯಾದ ಕಾಪಿಗಳಿಗೆ ಬದಲಾಗಿ ಎರಡನೇ ಕಾಪಿಗಳು ಕೊಡಲ್ಪಡಲಾರವು.

ಮೈಸೂರ ಗೆಜೆಟ್ ಚಂದಾದಾರರು ವಗ್ಯೆರೆ.

ಮೈಸೂರ ಗೆಜೆಟ್ ಬೆಂಗಳೂರಲ್ಲಿ ಛಾಪಿಸಲ್ಪಡುತ್ತೆ, ಮತ್ತು ಸದರೀ ಗೆಜೆಟ್ಟಿನಲ್ಲಿ ಛಾಪಿಸಲು ಉದ್ದೇಶಿಸಲ್ಪಟ್ಟ ಹಮೂಂ ನೋಟಿಸ್ ಮುಂತಾದವುಗಳೂ ಬೆಂಗಳೂರಲ್ಲಿರುವ ಮೈಸೂರ ಗೆಜೆಟ್ ಕಂಪೈಲರವರ ಹೆಸರಿಗೆ ವಿಳಾಸ ಬರಿಯಲ್ಪಟ್ಟು ರವಾನಿಸಲ್ಪಡತಕ್ಕದ್ದು.

	ಚಂದಾ.	ಟಪ್ಪಾಲ್ ಹಾಸಲ್ ಮೈಸೂರು ಸೀವೆ ಕಿವಾಯಿ ಇತರ ಸ್ಥಳಗಳಿಗೆ.
	ರೂ. ಆ.	ರೂ. ಆ.
ಇಂಗ್ಲಿಷ್ ಅಥವಾ ಕನ್ನಡ ಕಾಪಿ 1ಕ್ಕೆ 12 ತಿಂಗಳಿಗೆ	3 8	1 12
ಇಂಗ್ಲಿಷ್ ಮತ್ತು ಕನ್ನಡ ಸುದಾ 12 ತಿಂಗಳಿಗೆ	7 0	3 8
ಚೆಪ್ ಮೊಹೇ ಯಾ ಕ್ವಾರ್ಟರಿಗೆ		

ದಾವಣಿಯಿ ಪ್ರಕಾರ ದರಗಳು

	ರೂ.	ಆ.
ಚಾಲ್ತಿ ವರುಷದ ಗೆಜೆಟ್ ಕಾಪಿ 1ಕ್ಕೆ ರೆಗ್ಯುಲೇರ್ಸ್ ಯಾ ಆಕ್ಟ್ಸುಗಳು ಯಾವದೂ ಇಲ್ಲದಿದ್ದರೆ.	0	8

ಹಿಂದಿನ ವರುಷದ ಗೆಜೆಟ್ ಕಾಪಿಗಳಿಗೆ ಚಾರ್ಜು ಕೇಳಿ ತಿಳಿದುಕೊಳ್ಳಬಹುದು.

1891ನೇ ಇಸವಿ ಜುಲೈ 2ನೇ ಮಕ್ಕುಂ 155ನೇ ನಂಬರ್ ಉಳ್ಳ ಗವರ್ನಮೆಂಟ್ ಇಸ್ತಿಹಾರ್‌ನಾಮೆ ಅನುಸರಿಸಿ ಕನ್ನಡ ಗೆಜೆಟ್ ಮೈಸೂರು ಭೀಮೆಯಲ್ಲಿನ ಪಟೇಲ್ ಶಾನುಭೋಗರುಗಳಿಗೆ ಅರ್ಧ ದರಕ್ಕೆ ಕೊಡಲ್ಪಡುವದು; ಆದರೆ ಅಂಥಾ ಪಟೇಲ್, ಶಾನುಭೋಗರುಗಳು ಆ ಕಾಲದಲ್ಲಿ ವಾಸ್ತವ್ಯವಾಗಿ ಪಟೇಲಿ ಯಾ ಶಾನುಭಾವಿಕೆ ಕೆಲಸ ನೋಡುತಲಿದ್ದಾರೆಂಬದಾಗಿ ಆಯಾ ತಾಲ್ಲೂಕು ಅಮಲ್‌ದಾರರಿಂದ ಬಂದು ಸರಟಿಫಿಕೇಟನ್ನು ಪಡೆದು ಹಾಜರ್ಮಾಡಬೇಕಾಗಿರುತ್ತೆ.

1895ನೇ ಇಸವಿ ಜೂನ್ 21ನೇ ಮಕ್ಕುಂ 24205—6—ಜಿ. 6200ನೇ ನಂಬರ್ ಗವರ್ನಮೆಂಟ್ ಆರ್ಡರ್ ಅನುಸರಿಸಿ ಮೇಲ್ಕಂಡ ರಿಯಾಯಿತಿ ದರವು, ನಾಡ ಪಟೇಲರಿಗೂ ಲಗಾವು ಮಾಡಲ್ಪಟ್ಟಿರುತ್ತೆ.

ಸಿವಿಲ್ ಕೋರ್ಟ್‌ನಿಂದ ಕೊಡಲ್ಪಡುವ 1860ನೇ ಇಸವಿ XXVIIನೇ ಆಕ್ಟ್ಸು ಅನುಸರಿಸಿ ಸರ್ಟಿಫಿಕೇಟ್ ಬಗ್ಯೆ ನೋಟಿಸ್‌ಗಳು :—

	ರೂ.	ಆ.
ಮೊದಲನೇ ದಫಾ ಫಾಯಿಷ್ ಮಾಡತಕ್ಕ ಬಗ್ಯೆ ಇಂಗ್ಲೀಷು ಅಥವಾ ಕನ್ನಡ ..	2	8
ಎರಡನೇ ಸಲ ವ ಆತರುವಾಯ ಪ್ರತಿ ಆವರ್ತಿಗೂ ಡಿಟೋ ..	1	4

ಸಿವಿಲ್ ಪ್ರೊಸಿಡ್ಯೂರ್ ಕೋಡಿನ 347ನೇ ಸೆಕ್ಷನ್ ಅನುಸರಿಸಿ ದಿವಾಳಿ ಅಪ್ಲಿಕೇಷನ್‌ಗಳ ಬಗ್ಯೆ ನೋಟಿಸ್‌ಗಳಿಗೆ :—

ಮೊದಲನೇ ಸಲಕ್ಕೆ	5	0
ಎರಡನೇ ವ ಆತರುವಾಯ ಪ್ರತಿ ದಫಾಕ್ಕೆ ..	2	0

ಸಿವಿಲ್ ಪ್ರೊಸಿಡ್ಯೂರ್ ಕೋಡಿನ 354ನೇ ಸೆಕ್ಷನ್ ಅನುಸರಿಸಿ ಸಿವಿಲ್ ಕೋರ್ಟುಗಳಿಂದ ಕೊಡಲ್ಪಡುವ ದಿವಾಳಿ ಹುಕುಂಗಳು ಬಗರ್ ಚಾರ್ಜ್ ಪ್ರಕಟಿಸಲ್ಪಡುತ್ತವೆ.

ಡ್ಯೂಪ್ಲಿಕೇಟ್ ಕಾಪೀ ಪಟ್ಟೆ ವಗೈರೆ ಕೊಡುವ ಬಗ್ಯೆ ರೆವಿನ್ಯೂ ಆಫಿಸರ್‌ಗಳು ಕೊಡುವ ನೋಟಿಸ್‌ಗಳಿಗೆ :—

ಮೊದಲನೇ ಸಲಕ್ಕೆ	ಪುಟ 1ಕ್ಕೆ	..	10	0
ಎರಡನೇ ಸಲ ವ ಆತರುವಾಯ ಪ್ರತಿ ಸಲಕ್ಕೂ	,,	..	5	0

ಖಾಸಗೀ ಪ್ರಕಟನೆಗಳಿಗೆ ಈ ಕೆಳಗೆ ಕಾಣಿಸಲ್ಪಡುವ ದರಗಳ ಪ್ರಕಾರ ಚಾರ್ಜ್ ಮಾಡಲ್ಪಡುತ್ತೆ :—

ಮೊದಲನೇ ದಫಾ ಇಂಗ್ಲೀಷ್ ಅಥವಾ ಕನ್ನಡಕ್ಕೆ	ಪಚ್ಚಿ 1ಕ್ಕೆ	..	0	8
ಎರಡನೇ ದಫಾ ಡಿಟೋ	ಡಿಟೋ		0	6
ಮೂರನೇ ವ. ಆತರುವಾಯ ಪ್ರತಿ ಸಲಕ್ಕೆ	..	..	0	4

ಸೂಚನೆ.—ಚಂದಾ ವಗೈರೆ ಬಗ್ಯೆ ಸೋಸ್ಟೇಜ್ ಲೇಬಲ್ಲು ಕಳುಹಿಸಲ್ಪಟ್ಟಾಗ ರೂಪಾಯಿಗೆ ಬಂದಾಕೆಯಂತೆ ಜಾಸ್ತೀ ಲೇಬಿಲ್ಲು ಕಳುಹಿಸಲ್ಪಡತಕ್ಕದ್ದು.

ಗವರ್ನಮೆಂಟ್ ಆರ್ಡರ್ ಪ್ರಕಾರ ತಮಾಂ ಚಂದಾ ವೊಬಲಗುಗಳೂ, ಪ್ರಕಟನೇ ಚಾರ್ಜ್‌ಗಳೂ ಮುಂಗಡವಾಗಿ ಪಾವತಿ ಮಾಡಲ್ಪಡಬೇಕು.

ಸರ್ಕಾರಿಯಾಗಿ ಗೆಜೆಟ್ ಪಡೆಯುವೆ ಬಗ್ಯಾದ ದರಖಾಸ್ತುಗಳು ಮೈಸೂರ್ ಗವರ್ನಮೆಂಟ್ ಜನರಲ್ ಮತ್ತು ರೆವಿನ್ಯೂ ಇಲಾಖೆ ಸೆಕ್ರಟೆರಿಯವರಿಗೆ ಕಳುಹಿಸಲ್ಪಡತಕ್ಕದ್ದು.

ಗೆಜೆಟ್ ತಲಪಲಿಲ್ಲವೆಂಬ ಫಿರ್ಯಾದ್‌ಗಳು ಇದರಡಿ ರುಜು ಮಾಡಿರುವವರಿಗೆ ಆದು ತಲಪಬೇಕಾದ ತಾರೀಖು ಲಾಗಾಯತು ಒಂದು ವಾರದ ಒಳಗಾಗಿ ತಿಳಿಸಲ್ಪಡಬೇಕು.

ಮೈಸೂರ ಗಜೆಟ್‌ನಲ್ಲಿ ಛಾಪಿಸಲು ಉದ್ದೇಶಿಸಲ್ಪಟ್ಟ ತಮಾಂ ನೋಟಿಸ್ ವ ಇಸ್ತಿಹಾರ್‌ನಾಮೆಗಳೂ ಆ ಗೆಜೆಟ್ ಛಾಪಿಸಲ್ಪಡುವ ಮುಂದಿನ ಮಂಗಳವಾರದ ದಿವಸ ಮಧ್ಯಾನ್ಹ 12 ಘಂಟೆ ವಳಗಾಗಿ ಕಂಪ್ಯೆಲರ್ ಆಫೀಸಿಗೆ ತಲಪಬೇಕಾಗಿರುತ್ತೆ. ಆ ತರುವಾಯ ಕಳುಹಿಸಲ್ಪಡುವ ಯಾ ತಲಪುವ ಕಾಗದಗಳು, ಕೆಲಸ ನಿರ್ವಾಹಕ್ಕೆ ಅನುಕೂಲವಾಗಿದ್ದರೇನೇ ಹೊರ್ತು ಅನ್ಯಥಾ ಆದೇ ವಾರದ ಗೆಜೆಟ್ಟಿನಲ್ಲಿ ಛಾಪಿಸಲ್ಪಡುತ್ತೆಂಬ ಖಾತರಿ ಇಲ್ಲ.

ಜೆ. ಹ್ಯೂಂ ರೈಟ್,
ಕಂಪ್ಯೆಲರ್, ಮೈಸೂರ ಗೆಜೆಟ್.

Mysore Government Central Press, Bangalore—1903.